## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ರಘು ಆರ್. |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | (577) 50 |
| ಉತ್ತರಿಸಬೇಕಾದ ದಿನಾಂಕ | 20.08.2026 |
| ಉತ್ತರಿಸುವ ಸಚಿವರು | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಅಕ್ರಮ ನಿವೇಶನಗಳನ್ನು 50:50ರ ಅನುಪಾತದಲ್ಲಿ ವಿತರಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯ ಪ್ರಕರಣದಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಮಾನ್ಯ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ.ಎನ್. ದೇಸಾಯಿ ಇವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ವಿಚಾರಣಾ ಆಯೋಗವನ್ನು ರಚಿಸಲಾಗಿತ್ತು. ಮಾನ್ಯ ಏಕ ಸದಸ್ಯ ಆಯೋಗವು ದಿನಾಂಕ:30.07.2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ.<br><br>ಮಾನ್ಯ ಶ್ರೀ ಪಿ.ಎನ್. ದೇಸಾಯಿ ರವರ ನೇತೃತ್ವದಲ್ಲಿ ರಚಿಸಲಾಗಿದ್ದ ವಿಚಾರಣಾ ಆಯೋಗದ ವಿಚಾರಣಾ ವರದಿಯು ಸರ್ಕಾರಕ್ಕೆ ಸ್ವೀಕೃತಗೊಂಡ ನಂತರ ಸದರಿ ವಿಚಾರಣಾ ವರದಿಯನ್ನು ಸಚಿವ ಸಂಪುಟದ ಮುಂದೆ ಮಂಡಿಸಲಾಗಿತ್ತು.<br><br>ಸದರಿ ವಿಚಾರಣಾ ವರದಿಯನ್ನು ಸಚಿವ ಸಂಪುಟ ಅನುಮೋದಿಸಿದ ನಂತರ ಮಾನ್ಯ ಏಕಸದಸ್ಯ ವಿಚಾರಣಾ ಆಯೋಗವು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯನ್ನು ಸಮಗ್ರವಾಗಿ ಪರಿಶೀಲಿಸಿ, ವಿಚಾರಣಾ ವರದಿಯಲ್ಲಿನ ಪ್ರತಿಯೊಂದು ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಕ್ರಮದ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ತಾಂತ್ರಿಕ ಸಮಿತಿಯನ್ನು ರಚಿಸಿ ಉನ್ನತ ಮಟ್ಟದ ತಾಂತ್ರಿಕ ಸಮಿತಿಗೆ ವಹಿಸಬಹುದಾದ ಕಾರ್ಯವ್ಯಾಪ್ತಿ ಮತ್ತು ಷರತ್ತುಗಳನ್ನು ನಿಗದಿಪಡಿಸಲಾಗಿರುತ್ತದೆ. |
| (ಆ) | ಹಾಗಿದ್ದಲ್ಲಿ, ಸದರಿ ಪ್ರಾಧಿಕಾರದಿಂದ ಇದುವರೆಗೂ 50:50ರ ಅನುಪಾತದಲ್ಲಿ ಅಕ್ರಮವಾಗಿ ವಿತರಣೆಯಾಗಿರುವ ನಿವೇಶನಗಳ ಸಂಖ್ಯೆ ಎಷ್ಟು; ಯಾವ ಯಾವ ದಿನಾಂಕಗಳಲ್ಲಿ ಕ್ರಯಪತ್ರ ಹಂಚಿಕೆ ಮಾಡಿಕೊಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | |
| (ಇ) | ಸದರಿ ಪ್ರಾಧಿಕಾರದಿಂದ 50:50 ರ ಅನುಪಾತದಲ್ಲಿ ಸಂಸ್ಥೆ/ವ್ಯಕ್ತಿಗಳಿಗೆ ಅಕ್ರಮ ಕ್ರಯ ಪತ್ರಗಳನ್ನು ವಿತರಣೆ ಮಾಡಿ ನಿವೇಶನಗಳನ್ನು ಹಂಚಿಕೆ ಮಾಡಿರುವುದನ್ನು ಮುಟ್ಟುಗೋಲು ಹಾಕಿಕೊಳ್ಳಲು ಸರ್ಕಾರ ಕಾನೂನು ಪ್ರಕಾರ ಯಾವ ಕ್ರಮ ಕೈಗೊಳ್ಳಲಾಗಿದೆ; (ವ್ಯಕ್ತಿ ಮತ್ತು ಸಂಸ್ಥೆವಾರು ಸಂಪೂರ್ಣ ವಿವರ ನೀಡುವುದು) | |
| (ಈ) | ಖಾತೆ ಮತ್ತು ನಕ್ಷೆಗಳಿಗಾಗಿ ಸ್ಥಳೀಯ ಪ್ರಾಧಿಕಾರದಿಂದ ಎಷ್ಟು ನಿವೇಶನಗಳನ್ನು ಖಾತೆ ಮಾಡಿ | |

| | | |
|---|---|---|
| | ಹಂಚಿಕೆ ಮಾಡಲಾಗಿದೆ; ಈ ಬಗ್ಗೆ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕಾನೂನು ಪ್ರಕಾರ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ. | ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ಮಾನ್ಯ ಏಕಸದಸ್ಯ ವಿಚಾರಣಾ ವರದಿಯಲ್ಲಿನ ಶಿಫಾರಸ್ಸಿನಂತೆ ತುರ್ತಾಗಿ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ವರದಿ ಸಲ್ಲಿಸಿರುತ್ತದೆ.<br><br>ಉನ್ನತ ಮಟ್ಟದ ತಾಂತ್ರಿಕ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನಂತೆ ಸರ್ಕಾರದ ಪತ್ರ ಸಂಖ್ಯೆ: ನಅಇ 71 ಮೈಅಪ್ರಾ 2023(ಇ), ದಿನಾಂಕ:14-03-2023ರ ನಿರ್ದೇಶನವನ್ನು ಉಲ್ಲಂಘಿಸಿ ಬದಲಿ ನಿವೇಶನಗಳನ್ನು ಹಂಚಿಕೆ ಮಾಡಿರುವ ಎಲ್ಲಾ ಹಂಚಿಕೆ ಆದೇಶಗಳನ್ನು ರದ್ದುಪಡಿಸಲು ಕ್ರಮವಹಿಸುವಂತೆ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಮತ್ತು ಆಯುಕ್ತರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಗೆ ನಿರ್ದೇಶನ ನೀಡಲಾಗಿದೆ.<br><br>ಮಾನ್ಯ ಏಕಸದಸ್ಯ ವಿಚಾರಣಾ ವರದಿಯಲ್ಲಿನ ಶಿಫಾರಸ್ಸುಗಳ ಪ್ರತಿಯೊಂದು ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಕ್ರಮದ ಕುರಿತು ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ಪರಿಶೀಲಿಸಿ, ವರದಿ ಸಲ್ಲಿಸುವ ಪ್ರಕ್ರಿಯೆಯು ಜಾರಿಯಲ್ಲಿದೆ.<br><br>ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ಮಾನ್ಯ ಏಕಸದಸ್ಯ ವಿಚಾರಣಾ ವರದಿಯಲ್ಲಿನ ಶಿಫಾರಸ್ಸುಗಳ ಪ್ರತಿಯೊಂದು ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಕ್ರಮದ ಕುರಿತ ವರದಿಯು ಸರ್ಕಾರಕ್ಕೆ ಸ್ವೀಕೃತವಾದ ನಂತರ ಸದರಿ ವರದಿಯನ್ನಾಧರಿಸಿ ತಪ್ಪಿತಸ್ಥ ಅಧಿಕಾರಿಗಳ ಮೇಲ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಕ್ರಮವಹಿಸಲಾಗುವುದು. |
| (ಉ) | 50:50 ಪ್ರಾಧಿಕಾರದಿಂದ ರೇಟಿಂಗ್ ನಿರ್ಣಯ ಅಧಿಕೃತವಾಗಿ ಅಂಗೀಕರಿಸಲಾಗಿದೆಯೇ; ಸರ್ಕಾರ ಈ ನಿರ್ಣಯವನ್ನು ರದ್ದುಗೊಳಿಸಿ ಅಕ್ರಮ ನಿವೇಶನಗಳನ್ನು ವಾಪಸ್ ಪಡೆಯಲು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | |

**ಸಂಖ್ಯೆ :ನಅಇ 362 ಮೈಅಪ್ರಾ 2026(ಇ)**

(ಡಾ. ಯತೀಂದ್ರ ಸಿದ್ಧರಾಮಯ್ಯ)
ನಗರಾಭಿವೃದ್ಧಿ ಸಚಿವರು